ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/126/ಶಿ.ಕ್ರ/2018-19/ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 02/02/2019

# ಸುತ್ತೋಲೆ

ವಿಷಯ: ಸರ್ಕಾರಿ ಸಮಾರಂಭಗಳಲ್ಲಿ ಶಿಷ್ಟಾಚಾರಗಳನ್ನು ಪಾಲಿಸುವ ಬಗ್ಗೆ ಆಹ್ವಾನ ಪತ್ರಿಕೆಗಳಲ್ಲಿ ಶಿಷ್ಟಾಚಾರದನ್ವಯ ಹೆಸರುಗಳನ್ನು ಮುದ್ರಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 49 ರಾರಾಆ 93 ದಿನಾಂಕ:03.07.1993
2. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 31 ಹೆಚ್‌ಪಿಎ 2018 ದಿನಾಂಕ:06.08.2018

** ** **

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನಡೆಯುವ ಸಮಾರಂಭಗಳಿಗೆ ಮಾನ್ಯ ಸಚಿವರುಗಳು, ರಾಜ್ಯ ಸಚಿವರುಗಳು, ವಿಧಾನ ಮಂಡಲದ ವರಿಷ್ಠರು, ಲೋಕಸಭೆ /ರಾಜ್ಯಸಭೆಯ ಸದಸ್ಯರು, ವಿಧಾನ ಸಭೆ ಸದಸ್ಯರು ಹಾಗೂ ವಿಧಾನ ಪರಿಷತ್‌ನ ಸದಸ್ಯರುಗಳನ್ನು ಮತ್ತು ಇತರೆ ಜನಪ್ರತಿನಿಧಿಗಳನ್ನು ಆಹ್ವಾನಿಸುವಲ್ಲಿ ಶಿಷ್ಟಾಚಾರ ಉಲ್ಲಂಘಿಸುತ್ತಿರುವ ಬಗ್ಗೆ ಈ ಕಛೇರಿಯಲ್ಲಿ ಹಲವಾರು ದೂರುಗಳು ಸ್ವೀಕೃತವಾಗುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಆದುದರಿಂದ ಈ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪ್ರಥಮ ದರ್ಜೆ ಕಾಲೇಜುಗಳು/ಸರ್ಕಾರಿ ಕಾನೂನು ಕಾಲೇಜುಗಳ ಪ್ರಾಂಶುಪಾಲರುಗಳು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಶಿಷ್ಟಾಚಾರ ಸಂಬಂಧ ಹೊರಡಿಸಿರುವ Table of Precedence in Karnataka State ನಲ್ಲಿ ತಿಳಿಸಿರುವಂತೆ ಹಾಗೂ ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಿರುವ ನಿಯಮಗಳನ್ವಯ ಜನಪ್ರತಿನಿಧಿಗಳನ್ನು ಸಮಾರಂಭಕ್ಕೆ ಆಹ್ವಾನಿಸಲು ಹಾಗೂ ಆಹ್ವಾನ ಪತ್ರಿಕೆಯಲ್ಲಿ ಹೆಸರುಗಳನ್ನು ಮುದ್ರಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ. ಅಲ್ಲದೆ, ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಲತಾಣವಾದ www.dpar.kar.nic.in ನಲ್ಲಿ ಪ್ರಕಟಿಸಲಾಗಿರುವ ಶಿಷ್ಟಾಚಾರಕ್ಕೆ ಸಂಬಂಧಿಸಿದ ನೀತಿ-ನಿಯಮಗಳು, ಆದೇಶಗಳು ಮತ್ತು ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಕ್ರಮವನ್ನು ಅನುಸರಿಸಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಇನ್ನು ಮುಂದೆ ಈ ರೀತಿಯ ದೂರುಗಳು ಹಾಗೂ ಲೋಪದೋಷಗಳು ಏನಾದರೂ ಕಂಡುಬಂದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿಸಿ ಶಿಸ್ತುಕ್ರಮ ಜರುಗಿಸಲಾಗುವುದೆಂದು ತಿಳಿಸಲಾಗಿದೆ.

(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

**ಇವರಿಗೆ-<u>ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ</u>**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮತ್ತು ಕಾನೂನು ಕಾಲೇಜುಗಳ ಪ್ರಾಂಶುಪಾಲರುಗಳಿಗೆ
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ

**ಪ್ರತಿ:-ಮಾಹಿತಿಗಾಗಿ**

1. ಮಾನ್ಯ ಆಯುಕ್ತರು, ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಹೆಚ್ಚುವರಿ ನಿರ್ದೇಶಕರು ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆಗೆ
2. ಮಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಕೇಂದ್ರ ಕಛೇರಿ,ಬೆಂ -ಪ್ರಕಟಣೆಗಾಗಿ
3. ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ಎಲ್ಲಾ ವಿಭಾಗಗಳ ಅಧಿಕಾರಿಗಳು/ಅಧಿಕ್ಷಕರುಗಳಿಗೆ
4. ಕಛೇರಿ ಪ್ರತಿ